ಸದರೀ ದರಖಾಸ್ತುದಾರಳಾದ ಪಾರ್ವತಾಬಾಯಿಯ ಅರ್ಜೀಯನ್ನು 1888ನೇ ಇಸವಿ ಜನವರೀ ತಿಂಗಳು ತಾರೀಖು 27ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವಿಟೋಬಾನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 1085.

ಮೃತಪಟ್ಟ ತ್ಯಾಮಗೊಂಡ್ಲದ ದಾಸಶೆಟ್ಟಿಯ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಜಯರಾಮಶೆಟ್ಟಿ ಮೃತಪಟ್ಟ ಸದರೀ ದಾಸಶೆಟ್ಟಿಗೆ ಮಗನಾಗಬೇಕೆಂಬ ಹಕ್ಕುದಾರೀ ಮೇಲೆ ನೆಲವಂಗಲದ ತಾಲ್ಲೂಕು ತ್ಯಾಮಗೊಂಡ್ಲ ಸ್ಥಳದ ಚಿಟ್ಟೂರು ದಾಸಶೆಟ್ಟಿಯು ತ್ಯಾಮಗೊಂಡ್ಲದ ವಾಸಸ್ಥನಾಗಿ ಮೃತಪಟ್ಟ ದಾಸಶೆಟ್ಟಿಯ ಜಿಂದಗೀ ಬಗ್ಯಾಗಿ ಬರತಕ್ಕ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ಯು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಜಯರಾಮಶೆಟ್ಟಿಯ ಅರ್ಜೀಯನ್ನು 1888ನೇ ಇಸವಿ ಜನವರೀ ತಿಂಗಳು ತಾರೀಖು 12ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದಾಸಶೆಟ್ಟಿಯ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಯಿದರಿಂದ ತಿಳಿಯಪಡಿಸಿ ಯಿದೆ.

1887ನೇ ಇಸವಿ ಡಿಶಂಬರ್ ತಿಂಗಳು 9ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೇ ಕೊಡೋಣಾಗಿದೆ.

ಸಿ. ಕೈಸ್,
ಸಬ್ ಜಡ್ಜ್.

ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರ್ಯವರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 576.

ಮೃತಪಟ್ಟ ಜಗನ್ನಾಥನಾಯಿಡೂ ಯವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ವರದರಾಜುಲು ನಾಯಿಡುಯವರು ಮೃತಪಟ್ಟ ಸದರೀ ಜಗನ್ನಾಥನಾಯಿಡೂ ಯವರಿಗೆ ಯರಡನೇ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ದೇವರಾಜಮೊಹಲ್ಲಾ ಸ್ಥಳದ ಸದರೀ ವರದರಾಜುಲುನಾಯಿಡೂ ಯವರು ಸದರೀ ವಾಸಸ್ಥನಾಗಿ ಮೃತಪಟ್ಟ ಜಗನ್ನಾಥನಾಯಿಡೂ ಯವರ ಜಿಂದಗೀ ಬಗ್ಯಾಗಿ ಬರತಕ್ಕ 3200 ರೂಪಾಯಿ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ಯು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ವರದರಾಜುಲು ನಾಯಿಡೂಯವರ ಅರ್ಜೀಯನ್ನು 1888ನೇ ಇಸವಿ ಜನವರೀ ತಿಂಗಳು ತಾರೀಖು 30ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಜಗನ್ನಾಥನಾಯಿಡೂ ಯವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟ್ಯರೂ ಈ ಕೋರ್ಟಿನಲ್ಲಿ ಹಾಜರು ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಡಿಶಂಬರ್ ತಿಂಗಳು 6ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸೀ ನಮ್ಮ ದಸ್ತಖತ್ತೊಡನೇ ಕೊಡೋಣಾಗಿದೆ.

1887ನೇ ಇಸವಿ ಅರ್ಜೀ ನಂಬರ್ 577.

ಮೃತಪಟ್ಟ ಮಹಂತದೇವವಡೇರ ಆಸ್ತೀ ವಿಷಯದಲ್ಲಿ—

ಅರ್ಜೀದಾರ 1ನೇ ಈರಯ್ಯ 2ನೇ ಶಂಕರಯ್ಯ 3ನೇ ಮಹಂತದೇವರು ಮೈನರ್ ಗಾರ್ಡಿಯರ್ ಮತ್ತು ತಾಯಿ ಮಲ್ಲಮ್ಮ ಸಹ ಮೃತಪಟ್ಟ ಸದರೀ ಮಹಂತದೇವವಡೇರಿಗೆ ಮಕ್ಕಳು, ಹೆಂಡತೀ ಆಗಬೇಕೆಂಬ ಹಕ್ಕುದಾರೀ ಮೇಲೆ ತಿರುಮಕೂಡ್ಲು ನರಸೀಪುರದ ತಾಲ್ಲೂಕು ಬುವಹಳ್ಳಿಗೆ ಶೇರಿದ ವೀರಪ್ಪವಡೇರ ಹುಂಡಿ ಸ್ಥಳದ ಮೇಲ್ಕಂಡ 1—2—3ನೇ ಅರ್ಜೀದಾರು ಸದರೀ ವಾಸಸ್ಥನಾಗಿ ಮೃತಪಟ್ಟ

ಮಹಂತದೇವರ ಜಿಂದಗೀ ಬಗ್ಯಾಗಿ ಬರತಕ್ಕ 1,000 ರೂಪಾಯಿ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ 1—2—3ನೇ ಅರ್ಜೀದಾರ್ರು ಅರ್ಜೀಯನ್ನು 1888ನೇ ಇಸವಿ ಜನವರೀ ತಿಂಗಳು ತಾರೀಖು 30ರಲ್ಲು ಕೇಳಿಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮಹಂತ ದೇಹವಡೇರ ಆಸ್ತಿಗೆಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಯಿದೆ.

ಸ್ ಱ 1887ನೇ ಇಸವಿ ಡಿಸಂಬರ್ ತಿಂಗಳು 10ನೇ ತಾರೀಖಿನಲ್ಲಿ ಕೋರ್ಟಿನ ಮೊಹರ್‌ನಿಶೀ ನಮ್ಮ ದಸ್ತಖತ್ತೊಡನೇ ಕೊಡೋಣಾಗಿದೆ.

ಯಸ್. ಹೇಮಾಜೀರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಮೈಸೂರು ಸಬ್ ಜಡ್ಜೀಯವರ ಕೋರ್ಟಿನಲ್ಲಿ.

ದಿವಾಳೀಯೂದ ಡಿಕ್ರೀ ದೇಣೇದಾರ ಯಳಂದೂರು ಕಸಬೇಯಲ್ಲಿರುವ ಶಿವಾಚಾರದ ವೀರಕೆಟ್ಟೀವುಗ ಆವಂಣಕಟ್ಟೀ ಯಂಬವನ ವಿಷಯದಲ್ಲಿ—

ಸ್ ಱ 1887ನೇ ಇಸವಿ ದಿವಾಳೀ ಕೇಸ್ ನಂಬರ್ 321.

ಹುಕ್ಕುಂ.

ಮೇಲ್ಕಂಡ ಆವಂಣಕೆಟ್ಟೀ ಯಂಬವನು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಈ ಕೋರ್ಟು ರೊಬರೂ ಅರ್ಜೀದಾರನಾದ ಆವಂಣಕೆಟ್ಟೀ ಪರವಾಗಿ ಫಸ್ಟ್ ಗ್ರೇಡ್ ಪ್ಲೀಡರ್ ನಾರಾಯಣಾಯರನ್ನೂ ಮತ್ತು ಸದರೀಯವನ ಲೇಣೇದಾರ್ರಾದ 1ನೇ ಯಜಮಾನ ಪುಟ್ಟಣ್ಣನ ತರಫಿ ಅಡ್ವೊಕೇಟ್ ಮೆ|| ಕಂಠೀರವಾಚಾರ್, 2ನೇ ನಾರಾಯಣಕೆಟ್ಟೀ ಖುದ್ದು ಹಾಜರು ಇವರಿಗೂ ದರ್ಖಾಸ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್ರು ತಮಗೆ ಈ ದರ್ಖಾಸ್ತೀ ನೋಟೀಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿ ಹೋದರು, ಯಾರಂಬರೆ,—3ನೇ ಗುರುಬಸವಕೆಟ್ಟಿ.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನು ಸದರೀ ವೀರಕೆಟ್ಟೀ ಮಗ ಆವಂಣಕೆಟ್ಟೀ ಯಂಬವನು ಹೊಂದುವದಕ್ಕೆ ಹಕ್ಕುದಾರನಾಗುವದರ ಮೂಲಕ ದಿವಾಳೀಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳೀಯಾದವನ್ನ ನಿರ್ಬಂಧದಿಂದ ವಿಮೋಚನೇ ಮಾಡಿರುವದಲ್ಲದೇ ಇದಕ್ಕೆ ಲಗ್ಗತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೊಕ್ಕರವಾಗಿಯಾಗಲಿ ದಸ್ತಗಿರೀ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರೀಯಿಂದ ಸಹ ಅವನ್ನ ನಿಖಾಲಸ್ ಮಾಡಲಾಗಿರುತ್ತೆಯಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

ಸ್ ಱ 1887ನೇ ಇಸವಿ ನವಂಬರ್ 30ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್‌ನಿಶೀ ನಮ್ಮ ದಸ್ತಖತ್ತೊಡನೇ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರು.	ಲೇಣೇದಾರ್ರು ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರುಗಳ ವಾಸಸ್ಥಳ.	ಸಾಲಬಾಬತು.	ಇಂಥಾ ಲೇಣೇದಾರು ಯಾವಾಗ ಲೇಣೇ ಮಾಡಿದರು.	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವೀಯೇನಾದರೂ ಇದ್ದರೆ.	ಷರಾ.
1	ತಿರುಮಕೂಡ್ಲು ನರಸೀಪುರದ ತಾಲ್ಲೂಕು ನರಸೀಪುರದಲ್ಲಿರುವ ಯಜಮಾನ ಪುಟ್ಟಣ್ಣ ..	72—1—6	..	ಡಿಕ್ರೀ ಬಾಬತು.	